# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 67 | Pages. 2 | Date: 10-02-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 67 - ಪುಟಗಳು : 2 10-02-2026 ಮಂಗಳವಾರ | Ph: 8762954248 | ದರ : ₹1


# ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ನಿಷೇಧಾಜ್ಞೆ ರಕ್ಷಣೆ

## ಪ್ರತಿಭಟನೆ ಹಿನ್ನೆಲೆ ಜಿಲ್ಲಾಡಳಿತದ ಮುನ್ನೆಚ್ಚರಿಕೆ | ಪೊಲೀಸ್ ಬಿಗಿ ಭದ್ರತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದಶಕಗಳಿಂದ ಕುಂಟುತ್ತಾ ಸಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ 75 ಕಾಮಗಾರಿಯನ್ನು ನಿಗದಿತ ಗಡುವಿನೊಳಗೆ ಮುಗಿಸಲು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ನಿಷೇಧಾಜ್ಞೆ ಅಸ್ತ್ರ ಪ್ರಯೋಗಿಸಿದ್ದಾರೆ.

ಸಕಲೇಶಪುರ ತಾಲೂಕಿನ ಎನ್‌ಹೆಚ್ 75ರ 222+900ರಲ್ಲಿ ಮಂಜ್ರಾಬಾದ್ ಕೋಟೆ ಸಮೀಪ ದೋಣಿಗಾಲ್ ಪ್ರದೇಶದಲ್ಲಿ ರಸ್ತೆ ಕಾಮಗಾರಿ ಪ್ರಾರಂಭಿಸಲಾಗಿದೆ. ಆದರೆ, ಸೂಕ್ತ ಪರಿಹಾರ ಕಲ್ಪಿಸಬೇಕೆಂದು ರಸ್ತೆ ಪಕ್ಕದ ಭೂ ಮಾಲೀಕರು ಪ್ರತಿಭಟನೆಗೆ ಮುಂದಾಗಿದ್ದಾರೆ. ಈ ಹಿನ್ನೆಲೆಯಲ್ಲಿ ದೋಣಿಗಾಲ್ ರಸ್ತೆಯಿಂದ ಕೆಸಗನಹಳ್ಳಿ ರಸ್ತೆ ವರೆಗೆ ಕಾಮಗಾರಿ ನಡೆಯುವ 100 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೋಮವಾರ ಆದೇಶಿಸಿದ್ದಾರೆ.

ಹಾಸನ ಬೈಪಾಸ್ ರಸ್ತೆಯಿಂದ ದೋಣಿಗಾಲ್ ವಿಭಾಗದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕಾಗಿರುವುದರಿಂದ ಫೆ. 9 ರಿಂದ ಮಾ. 7ರ ವರೆಗೆ ಆದೇಶ ಜಾರಿಯಲ್ಲಿರಲಿದೆ.

ನಿಷೇಧಿತ ಪ್ರದೇಶದಲ್ಲಿ 5ಕ್ಕಿಂತ ಹೆಚ್ಚು ಜನರು ಗುಂಪಾಗಿ ಸೇರುವಂತಿಲ್ಲ. ಈ ಅವಧಿಯಲ್ಲಿ ಆಯುಧ ಹಾಗೂ ಮಾರಕಾಸ್ತ್ರಗಳೊಂದಿಗೆ ಓಡಾಡುವಂತಿಲ್ಲ. ಯಾವುದೇ ರೀತಿಯ ಪ್ರಚಾರ, ಘೋಷಣೆ ಕೂಗಲು ಅವಕಾಶವಿರುವುದಿಲ್ಲ. ಈ ಆದೇಶವು ಕಾಮಗಾರಿ ನಡೆಸುವ ಅಧಿಕಾರಿ ಅಥವಾ ಸಿಬ್ಬಂದಿಗೆ ಅನ್ವಯವಾಗುವುದಿಲ್ಲ. ಈ ನಿಬಂಧನೆಗಳನ್ನು ಉಲಂಘಿಸಿದರೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ.

### ರೈತರಿಂದ ಪ್ರತಿಭಟನೆ ತೀವ್ರ

ಹಾಸನ ಸಮೀಪದ ಕಂದಲಿಯಿಂದ ಹೆಗ್ಗದ್ದೆ ವರೆಗೆ ರಸ್ತೆ ಕಾಮಗಾರಿಯಿಂದ ವ್ಯಾಪಕ ಹಾನಿ ಉಂಟಾಗಿದೆ. ಭೂಮಿ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಇಲ್ಲವಾದರೆ ಕಾಮಗಾರಿಗೆ ಅವಕಾಶ ಮಾಡಿಕೊಡುವುದಿಲ್ಲವೆಂದು ಗ್ರಾಮಸ್ಥರು ಹಾಗೂ ರೈತರು ಪ್ರತಿಭಟನೆ ನಡೆಸಿದರು.



ಐದು ವರ್ಷಗಳ ಹಿಂದೆ ಆರಂಭವಾದ ರಸ್ತೆ ಕಾಮಗಾರಿಯ ವೇಳೆ ಮಳೆಗಾಲದ ನೀರು ಸರಾಗವಾಗಿ ಹರಿಯಲು ಅಗತ್ಯ ಚರಂಡಿ, ನೀರು ಹರಿವಿನ ವ್ಯವಸ್ಥೆ ಮಾಡದೆ ಸುಮಾರು 120 ಅಡಿಗೂ ಹೆಚ್ಚು ಎತ್ತರದಲ್ಲಿ ಮಣ್ಣು ತುಂಬಲಾಗಿದೆ. ಪರಿಣಾಮ ಮಳೆಗಾಲದಲ್ಲಿ ನೀರು ಹಾಗೂ ಮಣ್ಣು ಕೃಷಿ ಭೂಮಿಗೆ ಹರಿದು ಸುಮಾರು 20 ಎಕರೆಗೂ ಅಧಿಕ ಕಾಫಿ, ಅಡಿಕೆ ಹಾಗು ಇತರ ಬೆಳೆಗಳ ತೋಟಗಳು ಸಂಪೂರ್ಣವಾಗಿ ನಾಶವಾಗಿವೆ. ಅದರಿಂದ ಮುಂದಿನ 30 ರಿಂದ 35 ವರ್ಷಗಳ ವರೆಗೆ ಕೃಷಿ ಚಟುವಟಿಕೆ ನಡೆಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆಯೆಂದು ಆರೋಪಿಸಿದರು. ಸಂತ್ರಸ್ತರು ಈ ಬಗ್ಗೆ ಹಲವು ಬಾರಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗು ಜಿಲ್ಲಾಡಳಿತಕ್ಕೆ ಲಿಖಿತ ಮನವಿ ಸಲ್ಲಿಸಿದರೂ ಸ್ಪಂದಿಸಿಲ್ಲ. ಅಲ್ಲದೆ, ಮೂಲ ಡಿಪಿಆರ್ (ವಿಸ್ತೃತ ಯೋಜನಾ ವರದಿ) ಪ್ರಕಾರ ಕಾಮಗಾರಿ ನಡೆಸದೇ ಸ್ವರೂಪ ಬದಲಾಯಿಸಿ ಬಲವಂತವಾಗಿ ಕಾಮಗಾರಿ ಮುಂದುವರಿಸಲಾಗುತ್ತಿದೆಯೆಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಹಾನಿಗೊಳಗಾದ ಭೂಮಿ ಹಾಗೂ ಬೆಳೆಗಳಿಗೆ ವೈಜ್ಞಾನಿಕವಾಗಿ ಮೌಲ್ಯಮಾಪನ ಮಾಡಿ ಪರಿಹಾರ ನಿಗದಿಪಡಿಸಬೇಕು. ಅಲ್ಲಿಯವರೆಗೂ ಕಾಮಗಾರಿ ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು. ಸಂತ್ರಸ್ತೆ ಪ್ರಿಯಾಂಕ ಮಾತನಾಡಿ, ನಾಲ್ಕು ದಶಕಗಳಿಂದ ಬೆಳೆಸಿಕೊಂಡು ಬಂದ ಕಾಫಿ ತೋಟಗಳು ಸಂಪೂರ್ಣ ಹಾಳಾಗಿವೆ. ಹಲವು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ. ಪ್ರಶ್ನೆ ಮಾಡಿದವರ ಮೇಲೆಯೇ ದೂರು ದಾಖಲಿಸುವ ಪ್ರಯತ್ನ ನಡೆಯುತ್ತಿದೆಯೆಂದು ದೂರಿದರು.

### ಭರವಸೆ ಬಳಿಕ ಪ್ರತಿಭಟನೆ ವಾಪಸ್

ಪ್ರತಿಭಟನಾ ವಿಷಯ ತಿಳಿದು ಹೆಚ್ಚುವರಿ ಪೊಲೀಸ್ ವರಿಷ್ಟಾಧಿಕಾರಿ ತಮ್ಮಯ್ಯ ಹಾಗೂ ಡಿವೈಎಸ್ಪಿ ಮಾಲತೇಶ್ ಭೇಟಿ ನೀಡಿ ಗ್ರಾಮಸ್ಥರೊಂದಿಗೆ ಚರ್ಚಿಸಿದರು. ಸಂತ್ರಸ್ತರ ಬೇಡಿಕೆಗಳನ್ನು ಜಿಲ್ಲಾಧಿಕಾರಿ ಗಮನಕ್ಕೆ ತರಲಾಗುವುದು. ಫೆ. 12ರಂದು ಜಿಲ್ಲಾಧಿಕಾರಿ ಸಮ್ಮುಖದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸಂತ್ರಸ್ತರೊಂದಿಗೆ ಸಭೆ ನಡೆಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದೆಂಬ ಭರವಸೆಯ ಬಳಿಕ ಗ್ರಾಮಸ್ಥರು ಹಾಗೂ ರೈತರು ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆದರು.



2026ರ ಜೂನ್ ಅಂತ್ಯದೊಳಗೆ ಕಾಮಗಾರಿ ಮುಗಿಸಬೇಕೆಂಬ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸಿದ್ದಾರೆ. ದಶಕಗಳಿಂದ ಕಾಮಗಾರಿ ಕುಂಟುತ್ತಾ ಸಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹಾಗೂ ಸಂಸದ ಶ್ರೇಯಸ್ ಪಟೇಲ್ ಅವರು ಹಲವು ಬಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ನಿಗದಿತ ಗಡುವಿನೊಳಗೆ ಕೆಲಸ ಮುಗಿಸಬೇಕಿರುವುದರಿಂದ ಹೆಚ್ಚಿನ ಗಮನ ಹರಿಸಲಾಗಿದೆ. ಪರಿಹಾರಕ್ಕಾಗಿ ಭೂಮಾಲೀಕರು ಪ್ರತಿಭಟನೆ ನಡೆಸಿದರೆ ಕಾಮಗಾರಿ ಹಿನ್ನಡೆಯಾಗುತ್ತದೆಂದು ಜಿಲ್ಲಾಧಿಕಾರಿ ನಿಷೇಧಾಜ್ಞೆ ಅಸ್ತ್ರ ಪ್ರಯೋಗಿಸಿದ್ದಾರೆ.

# ಧರ್ಮಸ್ಥಳ ಪಾದಯಾತ್ರಿಕರಿಗೆ ತಂಪು ಪಾನೀಯ ವಿತರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಹಾಶಿವರಾತ್ರಿ ಅಂಗವಾಗಿ ಧರ್ಮಸ್ಥಳಕ್ಕೆ ಪಾದಯಾತ್ರೆ ಕೈಗೊಂಡಿರುವ ಜಿಲ್ಲೆ ಹಾಗೂ ಹೊರ ಜಿಲ್ಲೆಯ ಭಕ್ತರಿಗೆ ಪಟ್ಟಣದಲ್ಲಿ ಸೋಮವಾರ ಶಾಸಕ ಸಿ.ಎನ್.ಬಾಲಕೃಷ್ಣ ಬಾಳೆ ಹಣ್ಣು, ನೀರು ಹಾಗು ತಂಪು ಪಾನೀಯ ವಿತರಿಸುವ ಮೂಲಕ ಪಾದಯಾತ್ರೆಗೆ ಶುಭ ಹಾರೈಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಅಡಚಣೆ ಇಲ್ಲದೆ ಪಾದಯಾತ್ರಿಗಳು ಯಶಸ್ವಿಯಾಗಿ ಧರ್ಮಸ್ಥಳ ತಲುಪಲಿ ಎಂಬ ಪ್ರಾರ್ಥನೆಯೊಂದಿಗೆ ಕೆಂಪೇಗೌಡ ಬಳಗದಿಂದ ಆಹಾರ ಪದಾರ್ಥ ವಿತರಿಸಲಾಗಿದೆ ಎಂದರು.

ಧರ್ಮಸ್ಥಳಕ್ಕೆ ಸಾವಿರಾರು ವರ್ಷಗಳ ಪರಂಪರೆಯಿದೆ. ವರ್ಷದಿಂದ ವರ್ಷಕ್ಕೆ ಕ್ಷೇತ್ರಕ್ಕೆ ತೆರಳುವ ಭಕ್ತರ ಸಂಖ್ಯೆ ಏರಿಕೆಯಾಗುತ್ತಿದೆ. ಕ್ಷೇತ್ರದ ಮಹಿಮೆ ಹಾಗು ಧರ್ಮಾಧಿಕಾರಿ ಡಾ. ಡಿ.ವಿರೇಂದ್ರ ಹೆಗ್ಗಡೆ ಅವರ ನಿರ್ವಹಣೆಯಿಂದಾಗಿ ಹೆಚ್ಚು ಭಕ್ತರು ತೆರಳುತ್ತಾರೆ. ಬೆಂಗಳೂರು, ತುಮಕೂರು, ರಾಮನಗರ, ಕಣ್ಣೂರು, ಮಾಗಡಿ, ನಾಗಮಂಗಲ ಸೇರಿ ವಿವಿಧೆಡೆಯಿಂದ ಕೇಸರಿ ವಸ್ತ್ರ ಧರಿಸಿರುವ ಭಕ್ತರು ಪಟ್ಟಣ ಮಾರ್ಗವಾಗಿ ತಂಡೋಪ ತಂಡವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳದತ್ತ ಕಾಲ್ನಡಿಗೆಯಲ್ಲಿ ಸಾಗುತ್ತಿರುವ ದೃಶ್ಯ ಕಣ್ಮನ ಸೆಳೆಯುತ್ತಿದೆ ಎಂದರು.

ರಸ್ತೆಯುದ್ದಕ್ಕೂ ಅಲ್ಲಲ್ಲಿ ಸಂಘ-ಸಂಸ್ಥೆಗಳ ಕಾರ್ಯಕರ್ತರು ಹಾಗೂ ದಾನಿಗಳು ನೆರಳಿನ ವ್ಯವಸ್ಥೆಯೊಂದಿಗೆ ಯಾತ್ರಿಗಳಿಗೆ ಕಾಫಿ, ಟೀ, ತಿಂಡಿ, ಊಟ, ಮಜ್ಜಿಗೆ ಹಾಗು ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದು ಯಾವುದೇ ತೊಂದರೆಯಾಗದಂತೆ ಗಮನಹರಿಸಲಾಗುತ್ತಿದೆಯೆಂದರು. ಕೆಂಪೇಗೌಡ ಬಳಗದ ಸದಸ್ಯರಾದ ಮಂಜುನಾಥ್, ಶರತ್, ರವಿ, ಲೋಕೇಶ್, ಜಯರಾಮ್ ಇತರರು ಇದ್ದರು.

# ವಿವಿಧ ಬೇಡಿಕೆ ಈಡೇರಿಕೆಗಾಗಿ ಫೆ. 12 ರಂದು ಮುಷ್ಕರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ವಿರೋಧಿಸಿ ಫೆ. 12ರಂದು ನಡೆಯಲಿರುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರವನ್ನು ಬೆಂಬಲಿಸಿ, ಸಕಲೇಶಪುರ ತಾಲ್ಲೂಕಿನ ತೋಟ ಕಾರ್ಮಿಕರು ತೋಟಗಳ ಕೆಲಸ ಸ್ಥಗಿತಗೊಳಿಸಿ ಪಟ್ಟಣದಲ್ಲಿ ಮೆರವಣಿಗೆ, ರಸ್ತೆ ನಡೆಸಲಿದ್ದಾರೆ ಎಂದು ಸಿಐಟಿಯು ಕಾರ್ಯದರ್ಶಿ ಸೌಮ್ಯ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಬ್ರಿಟಿಷರ ಕಾಲದಿಂದಲೂ ಹೋರಾಟದ ಮೂಲಕ ಕಾರ್ಮಿಕರು ಪಡೆದ ಹಕ್ಕುಗಳನ್ನು ಕೇಂದ್ರ ಸರ್ಕಾರದ ಹೊಸ ಕಾರ್ಮಿಕ ಸಂಹಿತೆಗಳು ಕಸಿದುಕೊಳ್ಳುತ್ತಿವೆ. ಈ ನಾಲ್ಕು ಕಾರ್ಮಿಕ ಸಂಹಿತೆಗಳು ತೋಟ ಕಾರ್ಮಿಕರ ಪಾಲಿಗೆ ಮರಣ ಶಾಸನಗಳಾಗಿವೆ. ಕಾರ್ಮಿಕ ಸಂಹಿತೆಗಳ ಜಾರಿಯಿಂದ 8 ಗಂಟೆಗಳ ಕೆಲಸದ ಅವಧಿಯನ್ನು 12 ಗಂಟೆಗಳಿಗೆ ಹೆಚ್ಚಿಸುವ ಅವಕಾಶ ದೊರೆಯಲಿದೆ. ಹೈಯರ್ ಅಂಡ್ ಫೈರ್ ನೀತಿಯಿಂದ ಉದ್ಯೋಗ ಭದ್ರತೆ ಸಂಪೂರ್ಣವಾಗಿ ಕಳೆದು ಹೋಗಲಿದ್ದು, ಖಾಯಂ ಉದ್ಯೋಗಗಳೇ ಇಲ್ಲದಂತಾಗುತ್ತವೆ ಎಂದರು. ಕಾರ್ಮಿಕರು ಸಂಘ ಕಟ್ಟಿಕೊಳ್ಳುವ ಹಾಗೂ ಮುಷ್ಕರ ನಡೆಸುವ ಹಕ್ಕುಗಳ ಮೇಲೆ ಈ ಕಾನೂನುಗಳು ದಾಳಿ ಮಾಡುತ್ತಿವೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿರುವ ಈ ಸಂದರ್ಭದಲ್ಲಿ ವೈಜ್ಞಾನಿಕ ಕನಿಷ್ಠ ವೇತನವನ್ನು ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೂ ಅವಕಾಶವಿಲ್ಲದಂತಾಗಿದೆ ಎಂದು ಆರೋಪಿಸಿದರು. ಫೆ. 12ರಂದು ನಡೆಯುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಅಕ್ಷರ ದಾಸೋಹ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ರಾಮ ಪಂಚಾಯಿತಿ ಸಂಘಟನೆಗಳವರು ಸಂಪೂರ್ಣ ಬೆಂಬಲ ಘೋಷಿಸಿದ್ದು, ಈ ಹೋರಾಟಕ್ಕೆ ವ್ಯಾಪಕ ಬೆಂಬಲ ವ್ಯಕ್ತವಾಗಿದೆ ಎಂದು ಸೌಮ್ಯ ತಿಳಿಸಿದರು.

ಅಕ್ಷರ ದಾಸೋಹ ಸಂಘಟನೆಯ ಸಂಘಟನಾ ಕಾರ್ಯದರ್ಶಿ ಎಂ.ಎಂ. ಸುಮಿತ್ರಾ, ಅಂಗನವಾಡಿ ಕಾರ್ಯಕರ್ತೆಯರ ಸಂಘದ ಕಾರ್ಯದರ್ಶಿಗಳಾದ ಬಿ.ವಿ.ಪ್ರೀತು, ಎಚ್.ಎಸ್. ಸುಮಿತ್ರಾ ಉಪಸ್ಥಿತರಿದ್ದರು.


# ಕ್ಷೇತ್ರ ಅಭಿವೃದ್ಧಿ ತಡೆಗೆ ಹಲವರ ಸಂಚು: ಕೆಎಂಶಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿ ತಡೆಯಲು ವ್ಯವಸ್ಥಿತ ಸಂಚು ನಡೆಯುತ್ತಿದೆ ಎಂದು ಶಾಸಕ ಕೆ.ಎಂ ಶಿವಲಿಂಗೇಗೌಡ ಆಕ್ರೋಶ ವ್ಯಕ್ತಪಡಿಸಿದರು.

30 ಕೋಟಿ ರೂ. ವೆಚ್ಚದಲ್ಲಿ ನಗರದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ರಾಜ್ಯ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಕಾಮಗಾರಿಗೆ ಸೋಮವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿ, ನನ್ನ ವಿರುದ್ಧ ಮಾಡುವ ನಿರಾಧಾರ ಆರೋಪಗಳಿಗಾಗಲಿ, ಟೀಕೆ ಟಿಪ್ಪಣಿ ಮಾಡುವ ಮೂಲಕ ನನ್ನನ್ನು ತಡೆಯಬಹುದು ಎಂಬ ಭ್ರಮೆ ಬೇಡ, ಕ್ಷೇತ್ರದ ಜನತೆ ನನ್ನೊಂದಿಗೆ ಇರುವ ತನಕ ಕ್ಷೇತ್ರದ ಅಭಿವೃದ್ಧಿಯನ್ನು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂದು ತಮ್ಮ ರಾಜಕೀಯ ವಿರೋಧಿಗಳಿಗೆ ಟಾಂಗ್ ನೀಡಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 7 ದಶಕ ಕಳೆದಿದ್ದರೂ ಕ್ಷೇತ್ರದ ಜನತೆ ಶುದ್ಧ ಕುಡಿಯುವ ನೀರು ಸಿಗದೇ ಪರದಾಡುತ್ತಿದ್ದರು. ಕೆಲ ಮಹಾ ನಾಯಕರು ಅರಸೀಕೆರೆಗೆ ನದಿ ಮೂಲದಿಂದ ನೀರು ಕೊಡಲು ಸಾಧ್ಯವೇ ಇಲ್ಲ ಎಂದು ಹೇಳುತ್ತಿದ್ದರು.



ಕ್ಷೇತ್ರದ ಜನತೆಯ ಆಶೀರ್ವಾದದ ಬಲದಿಂದ ನಾನು ನಡೆಸಿದ ಹೋರಾಟ ಇಂದು ನಗರ ಮಾತ್ರವಲ್ಲ, ಗ್ರಾಮೀಣ ಭಾಗದ ಜನತೆಯೂ ಸಹ ನದಿ ಮೂಲದ ಶುದ್ಧ ನೀರನ್ನು ಕುಡಿಯುತ್ತಿದ್ದಾರೆ. ಇದು ಶಾಸಕನಾಗಿ ನಾನು ಮಾಡಿರುವ ಸಾಧನೆ ಅಲ್ಲವೇ ಎಂದರು.

ನಾನು ಶಾಸಕನಾದ ಬಳಿಕ ಕ್ಷೇತ್ರದ ಅಭಿವೃದ್ಧಿ ಚಿತ್ರಣವೇ ಬದಲಾಗಿದೆ. ಹತ್ತಾರು ಜನಪರ ಶಾಶ್ವತ ಯೋಜನೆಗಳು ಅರಸೀಕೆರೆಯನ್ನು ಮಾದರಿ ನಗರವನ್ನಾಗಿಸಿದರೆ ಶಿಕ್ಷಣ, ಆರೋಗ್ಯ, ನಗರ ಸೇರಿದಂತೆ ಗ್ರಾಮೀಣ ಭಾಗದಲ್ಲಾಗಿರುವ ರಸ್ತೆ ಅಭಿವೃದ್ಧಿ ಸಾಧನೆ ಅಲ್ಲವೇ ಎಂದು ನನ್ನನ್ನು ಟೀಕಿಸುವವರು ಅರ್ಥೈಸಿಕೊಂಡು ನಡೆಯಿರಿ ತಿರುಗೇಟು ನೀಡಿದರು.

ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್ ಮಾತನಾಡಿ, ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಹಾಗೂ ನಿಮ್ಮ ರಾಜಕೀಯ ಏಳಿಗೆ ಸಹಿಸದೆ ಹತಾಶರಾಗಿರುವವರು ಮಾಡುವ ಟೀಕೆಗೆ ನೀವು ಕಿವಿಗೊಡಬೇಡಿ ಎಂದು ಶಾಸಕರಿಗೆ ಮನವಿ ಮಾಡಿದರು.

ರೈಲ್ವೆ ನಿಲ್ದಾಣಕ್ಕೆ ಹೊಂದಿಕೊಂಡಂತೆ ಇರುವ ಬಸ್ ನಿಲ್ದಾಣವನ್ನು 30 ಕೋಟಿ ರೂ. ಅನುದಾನದಲ್ಲಿ ಅಭಿವೃದ್ಧಿಪಡಿಸುತ್ತಿರುವುದು, ಇನ್ನೂ ನೂರಾರು ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿರುವ ಶಾಸಕರಿಗೆ ಅವರೇ ಸಾಟಿ ಎಂದು ಪ್ರಶಂಸಿಸಿದರು.

ನಗರ ಸಭೆ ನಿಕಟ ಪೂರ್ವ ಅಧ್ಯಕ್ಷ ಎಂ.ಸಮಿವುಲ್ಲಾ ಮಾತನಾಡಿ, ಬಸ್ ನಿಲ್ದಾಣದ ಸುತ್ತಮುತ್ತ ಸಣ್ಣಪುಟ್ಟ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದ ವ್ಯಾಪಾರಿಗಳ ಬದುಕು ಬಸ್ ನಿಲ್ದಾಣ ಅಭಿವೃದ್ಧಿಯಿಂದ ಭದ್ರವಾಗುತ್ತಿದ್ದು, ಇವರಿಗೂ ಸೂಕ್ತ ವ್ಯವಸ್ಥೆ ಕಲ್ಪಿಸಲು ಶಾಸಕರು ಗಮನಹರಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಕೆಪಿಸಿಸಿ ಕಾರ್ಯದರ್ಶಿ ಜಿ.ಬಿ.ಶಶಿಧರ್, ಬಾಣಾವರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮ ಶೇಖರ್, ನಗರಸಭೆ ಮಾಜಿ ಸದಸ್ಯರಾದ ವೆಂಕಟಮುನಿ, ದರ್ಶನ್, ಕಾಂಗ್ರೆಸ್ ಮುಖಂಡರಾದ ಸುಬ್ರಹ್ಮಣ್ಯ ಬಾಬು, ಕೃಷ್ಣ, ತಾಪಂ ಮಾಜಿ ಅಧ್ಯಕ್ಷೆ ಮಂಜುಳಾಬಾಯಿ, ಚಂದ್ರನಾಯ್ಕ್, ಜಿಪಂ ಮಾಜಿ ಸದಸ್ಯೆ ಸುಲೋಚನಾ ಬಾಯಿ ಗುತ್ತಿಗೆದಾರ ಶಂಕರ್ ಇದ್ದರು.

# ಅಟ್ರಾಸಿಟಿ ಕಾಯ್ದೆ ದುರುಪಯೋಗ ತಡೆಗೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಟ್ರಾಸಿಟಿ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿ ತಾಲ್ಲೂಕು ವಕೀಲರ ಸಂಘದಿಂದ ಪ್ರಭಾರ ಉಪವಿಭಾಗಾಧಿಕಾರಿ ಮಂಜುನಾಥ್ ಅವರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ ವಿರುದ್ಧ ಕ್ರಮ ಕೈಗೊಳ್ಳಬೇಕು. ಕೂಡಲೇ ಸೇವೆಯಿಂದ ಅಮಾನತು ಅಥವಾ ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿದರು.

ವಕೀಲರ ಸಂಘದ ಅಧ್ಯಕ್ಷ ಯಶವಂತ್ ಮಾತನಾಡಿ, ನಮ್ಮ ಸಂಘದ ಸದಸ್ಯ ಅಭಿಜ್ಞಾನ್ ಅವರು ಸುಭಾಷ್ ಮೈದಾನದ ಸಮೀಪ ಹೊಂದಿರುವ ಆಸ್ತಿಗೆ ಸಂಬಂಧಿಸಿದಂತೆ ಹೈಕೋರ್ಟ್ ಎರಡು ವರ್ಷಗಳ ಹಿಂದೆಯೇ ಅವರ ಹೆಸರಿಗೆ ಖಾತೆ ಮಾಡಿಕೊಡುವಂತೆ ಪುರಸಭೆಗೆ ಸ್ಪಷ್ಟ ನಿರ್ದೇಶನ ನೀಡಿದ್ದರೂ, ಪುರಸಭಾ ಅಧಿಕಾರಿಗಳು ಉದ್ದೇಶಪೂರ್ವಕವಾಗಿ ನಿರ್ಲಕ್ಷ್ಯ ತೋರಿದ್ದಾರೆ ಎಂದು ಆರೋಪಿಸಿದರು. ಹೈಕೋರ್ಟ್ ಆದೇಶಕ್ಕೂ ಮನ್ನಣೆ ನೀಡದ ಈ ಅಧಿಕಾರಿಗಳ ನಡೆ ನ್ಯಾಯಾಂಗ ವ್ಯವಸ್ಥೆಗೆ ಅವಮಾನವಾಗಿದೆ ಎಂದರು.



ಖಾತೆಗಾಗಿ ಅಭಿಜ್ಞಾನ್ ಅವರು ತಮ್ಮ ತಂದೆಯ ಮೂಲಕ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವ ಸ್ಪಂದನೆ ದೊರಕದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಾಂತಿಯುತ ಧರಣಿ ನಡೆಸಬೇಕಾಯಿತು. ಮೂರನೇ ದಿನ ಜಿಲ್ಲಾಧಿಕಾರಿ ಸೂಚನೆಯಂತೆ ಪಿಡಿಒ ಕಚೇರಿಗೆ ಕರೆಸಿಕೊಂಡ ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಈ ರೀತಿ ತೊಂದರೆ ನೀಡಿದರೆ ಅಟ್ರಾಸಿಟಿ ಪ್ರಕರಣ ದಾಖಲಿಸುತ್ತೇನೆ ಎಂದು ಬೆದರಿಕೆ ಹಾಕಿದ್ದಾರೆ ಎಂಬುದಾಗಿ ಯಶವಂತ್ ಗಂಭೀರ ಆರೋಪ ಮಾಡಿದರು.

ಈ ಕುರಿತು ಅಭಿಜ್ಞಾನ್ ಅವರು ಎಸ್ಪಿಗೆ ದೂರು ಸಲ್ಲಿಸಿದ್ದರೂ, ಅದನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗಿದ್ದು, ಬಳಿಕ ಮಹೇಶ್ವರಪ್ಪ ಅವರು ಹಾಸನ ನಗರ ಪೊಲೀಸ್ ಠಾಣೆಯಲ್ಲಿ ಅಟ್ರಾಸಿಟಿ ಕಾಯ್ದೆ ಹಾಗೂ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಡಿ ಐಪಿಸಿ 353ರಂತೆ ಪ್ರಕರಣ ದಾಖಲಿಸಿದ್ದಾರೆ. ಇದು ಅಧಿಕಾರ ಹಾಗೂ ಜಾತಿಯನ್ನು ದುರುಪಯೋಗಪಡಿಸಿಕೊಂಡು ಉದ್ದೇಶಪೂರ್ವಕವಾಗಿ ಸುಳ್ಳು ಪ್ರಕರಣ ದಾಖಲಿಸಿದ ಸ್ಪಷ್ಟ ಉದಾಹರಣೆ ಎಂದು ವಕೀಲರ ಸಂಘ ಆರೋಪಿಸಿದೆ.

ವಕೀಲ ವೇಣು ಮಾತನಾಡಿ, ಯಾವುದೇ ಕಾಯ್ದೆಯ ಉದ್ದೇಶ ಶೋಷಿತರ ರಕ್ಷಣೆಯಾಗಿರಬೇಕು. ಆದರೆ, ಇಲ್ಲಿ ಜಾತಿಯನ್ನು ಮುಂದಿಟ್ಟುಕೊಂಡು ಅಟ್ರಾಸಿಟಿ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ಸುಳ್ಳು ಪ್ರಕರಣ ದಾಖಲಿಸಲಾಗಿದೆ. ಸಮಾಜದಲ್ಲಿ ಜಾತಿ ವೈಷಮ್ಯವನ್ನು ಉಂಟುಮಾಡುವ ಅಪಾಯಕಾರಿ ಪ್ರಯತ್ನ ನಡೆಯುತ್ತಿದೆ. ಇಂತಹ ಅಧಿಕಾರಿಗಳು ಸಾರ್ವಜನಿಕ ಸೇವೆಗೆ ಅಯೋಗ್ಯರು. ತಕ್ಷಣ ಮೇಲಧಿಕಾರಿಗಳು ಇವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ವಿದ್ಯುತ್ ಉಪ ಕೇಂದ್ರದಿಂದ ಅನುಕೂಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಜನಸಾಮಾನ್ಯರ ಸಮಸ್ಯೆಗೆ ಸ್ಪಂದಿಸುವುದು ಜನಪ್ರತಿನಿಧಿಗಳ ಆದ್ಯ ಕರ್ತವ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಪಾಳ್ಯಹೋಬಳಿಯ ದಾನಿಹಳ್ಳಿ ಗ್ರಾಮದಲ್ಲಿ 20 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ವಿದ್ಯುತ್ ವಿತರಣಾ ಉಪಕೇಂದ್ರಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ ಶೇ.80ಕ್ಕೂ ಹೆಚ್ಚು ರೈತರಿದ್ದು, ಅವರಿಗೆ ನಿರಂತರ ವಿದ್ಯುತ್ ಹಾಗೂ ನೀರು ದೊರೆತರೆ ಸ್ವಾವಲಂಬಿ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದರು. ಬಹುವರ್ಷಗಳ ಬೇಡಿಕೆಯಾಗಿದ್ದ ಈ ವಿದ್ಯುತ್ ವಿತರಣಾ ಉಪಕೇಂದ್ರ ನಿರ್ಮಾಣದಿಂದ ಪಾಳ್ಯ ಕಸಬಾ ಹೋಬಳಿಯ ಬಹುತೇಕ ಭಾಗಗಳಿಗೆ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಸರಬರಾಜು ಲಭ್ಯವಾಗಲಿದೆ. ಇದರಿಂದ ಕೃಷಿ ಚಟುವಟಿಕೆಗಳಿಗೆ ಮತ್ತಷ್ಟು ಬಲ ಸಿಗಲಿದೆ ಎಂದು ಹೇಳಿದರು.

ಕೊಡಗಿಹಳ್ಳಿ ವಿದ್ಯುತ್ ವಿತರಣಾ ಉಪಕೇಂದ್ರ ಸ್ಥಾಪನೆಗೂ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರಿಗೆ ಮನವಿ ಮಾಡಲಾಗಿದ್ದು, ಜಾಗದ ಸಮಸ್ಯೆ ಬಗೆಹರಿದಿದೆ. ಶೀಘ್ರದಲ್ಲೇ ಅಲ್ಲಿಯೂ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಭರವಸೆ ನೀಡಿದರು.



ಬ್ಯಾಬ ಅರಣ್ಯ ಪ್ರದೇಶದಲ್ಲಿನ ಪುನರ್ವಸತಿ ಕುಟುಂಬಗಳಿಗೆ ನೀಡಿರುವ ಜಮೀನಿಗೆ ಸರಿಯಾದ ದಾಖಲೆಗಳಿಲ್ಲದೆ ಜನರು ಸಂಕಷ್ಟ ಅನುಭವಿಸುತ್ತಿದ್ದು, ಅವರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯಲಾಗಿದೆ ಎಂದರು. ಅಲ್ಲದೇ ಎಪಿಎಂಸಿ ಮಾರುಕಟ್ಟೆ ಸ್ಥಾಪನೆಗಾಗಿ ತಾಲ್ಲೂಕಿನ ಹಿರಿಯರು ನಡೆಸಿದ ಹೋರಾಟ ಶೀಘ್ರದಲ್ಲೇ ಫಲ ನೀಡಲಿದೆ. ತಾಲ್ಲೂಕಿನ ರೈತರ ಹಲವು ಸಮಸ್ಯೆಗಳನ್ನು ಆದಷ್ಟು ಬೇಗ ಬಗೆಹರಿಸುವುದಾಗಿ ತಿಳಿಸಿದರು.

### ವಾಟೆಹೊಳೆ-ಯಗಚಿ ಜಲಾಶಯಕ್ಕೆ ಕಾಯಕಲ್ಪ

ವಾಟೆಹೊಳೆ ಜಲಾಶಯದ ಕಾಲುವೆ ದುರಸ್ತಿ ಆಗದೆ 18 ಸಾವಿರ ಹೆಕ್ಟರ್ ಬದಲು ಕೇವಲ 5 ಸಾವಿರ ಹೆಕ್ಟರ್ ಪ್ರದೇಶಕ್ಕೆ ಮಾತ್ರ ನೀರು ಹರಿಯುತ್ತಿದೆ. ಜೊತೆಗೆ ಯಗಚಿ ಜಲಾಶಯ ಆಲೂರಿನ ಭಾಗಗಳಲ್ಲಿ ಹರಿದರೂ ರೈತರಿಗೆ ಪ್ರಯೋಜನವಾಗಿಲ್ಲ. ಈ ಬಗ್ಗೆ ವಿಧಾನಸಭೆಯಲ್ಲಿ ಜಲಸಂಪನ್ಮೂಲ ಸಚಿವರ ಗಮನ ಸೆಳೆದಿದ್ದು, ಸಮಸ್ಯೆ ಪರಿಹಾರಕ್ಕೆ ಭರವಸೆ ಲಭಿಸಿದೆ. ಕಾಲುವೆ ದುರಸ್ತಿ ಮಾಡಿ ಸಂಪೂರ್ಣ 18 ಸಾವಿರ ಹೆಕ್ಟರ್ ಪ್ರದೇಶಕ್ಕೆ ನೀರು ಹಾಯಿಸುವವರೆಗೂ ಹೋರಾಟ ಮುಂದುವರಿಸುತ್ತೇನೆ ಎಂದರು.

ಸಮಾರಂಭದಲ್ಲಿ ಸೆಸ್ಕ್ ಕಾರ್ಯ ನಿರ್ವಾಹಕ ಇಂಜಿನಿಯರ್ ಶಿವಾನಂದ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವಿಕುಮಾರ್, ಪಾಳ್ಯ ಸೆಸ್ಕ್ ಜೆಇ ಶಶಿಕಿರಣ್, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಸುಬ್ರಹ್ಮಣ್ಯ, ಉಪ ತಹಸೀಲ್ದಾರ್ ಪ್ರಭಾಕರ್, ವಿಜಯಕುಮಾರ್, ನೇತ್ರಾವತಿ, ಉಮಾರವಿಪ್ರಕಾಶ್, ಎ.ಹೆಚ್. ರಮೇಶ್, ರಘು ಪಾಳ್ಯ, ಕೃಷ್ಣಮೂರ್ತಿ, ಪಿಡಿಒ ದರ್ಶನ್ ಇತರರಿದ್ದರು.

# ರಂಗಭೂಮಿ ಕಲಾವಿದರ ಭೇಟಿ : ಮಕ್ಕಳಲ್ಲಿ ಸೃಜನಶೀಲತೆಗೆ ಉತ್ತೇಜನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಹೊಯ್ಸಳಪಥ ಪತ್ರಿಕೆ ಹಾಗೂ ರಂಗಭೂಮಿ ಕಲಾವಿದರಾದ ಪೂಜಾ ರಘುನಂದನ್ ಅವರ ಸಹಯೋಗದಲ್ಲಿ ಮಕ್ಕಳ ರಂಗಭೂಮಿ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಶಾಲಾ ಆಡಳಿತ ಮಂಡಳಿಯ ಡಾ. ಎಚ್. ಎನ್. ಚಂದ್ರಶೇಖರ್ ಹಾಗೂ ಮಮತಾ ಚಂದ್ರಶೇಖರ್ ಅವರ ಮಾರ್ಗದರ್ಶನ ಮತ್ತು ಪ್ರೋತ್ಸಾಹದೊಂದಿಗೆ ನಡೆಯಿತು. ಅವರ ನಿರಂತರ ಬೆಂಬಲದಿಂದ ಶಾಲೆಯಲ್ಲಿ ಶೈಕ್ಷಣಿಕ ಸಾಧನೆಯ ಜೊತೆಗೆ ಸಾಂಸ್ಕೃತಿಕ ಹಾಗೂ ಸೃಜನಾತ್ಮಕ ಚಟುವಟಿಕೆಗಳಿಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ.

ಕಾರ್ಯಕ್ರಮದ ವೇಳೆ ರಂಗಭೂಮಿ ಕಲಾವಿದೆ ಪೂಜಾ ರಘುನಂದನ್ ಅವರು ತಮ್ಮ ರಂಗಭೂಮಿ ಅನುಭವಗಳನ್ನು ಹಂಚಿಕೊಂಡು, ಮಕ್ಕಳ ರಂಗಭೂಮಿಯ ಮಹತ್ವವನ್ನು ವಿವರಿಸಿದರು. ಬಾಲ್ಯದಿಂದಲೇ ನಾಟಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಅವರು, ಹಲವು ವರ್ಷಗಳಿಂದ ಮಕ್ಕಳ ರಂಗಭೂಮಿ ತರಬೇತಿ ಶಿಬಿರಗಳು, ಕಾರ್ಯಾಗಾರಗಳು ಹಾಗೂ ನಾಟಕ ಪ್ರದರ್ಶನಗಳ ಮೂಲಕ ಅನೇಕ ಮಕ್ಕಳಲ್ಲಿ ರಂಗಭೂಮಿಯ ಆಸಕ್ತಿಯನ್ನು ಬೆಳೆಸಿದ್ದಾರೆ.

ರಂಗಭೂಮಿಯನ್ನು ಕೇವಲ ಮನರಂಜನೆಯ ಮಾಧ್ಯಮವಲ್ಲದೆ, ಮಕ್ಕಳ ವ್ಯಕ್ತಿತ್ವ ವಿಕಾಸ, ಆತ್ಮವಿಶ್ವಾಸ, ಸಂವಹನ ಕೌಶಲ್ಯ, ಶಿಸ್ತು ಮತ್ತು ಸೃಜನಶೀಲತೆಯನ್ನು ಬೆಳೆಸುವ ಶಕ್ತಿಯುತ ವೇದಿಕೆಯಾಗಿ ಅವರು ಪರಿಚಯಿಸಿದರು.


ಗ್ರಾಮೀಣ ಹಾಗೂ ನಗರ ಪ್ರದೇಶಗಳ ಮಕ್ಕಳಿಗೂ ರಂಗಭೂಮಿಯ ಅವಕಾಶಗಳು ತಲುಪಬೇಕು ಎಂಬ ಉದ್ದೇಶದಿಂದ ಅವರು ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳಿಗಾಗಿ ನಡೆಸಲಾಗುವ ವಿವಿಧ ರಂಗಭೂಮಿ ಚಟುವಟಿಕೆಗಳು, ನಾಟಕಾಭ್ಯಾಸ, ಸಂಭಾಷಣೆ, ಅಭಿನಯ ಮತ್ತು ವೇದಿಕೆ ಧೈರ್ಯವನ್ನು ಹೆಚ್ಚಿಸುವ ವಿಧಾನಗಳ ಕುರಿತು ಮಾಹಿತಿ ನೀಡಲಾಯಿತು. ವಿದ್ಯಾರ್ಥಿಗಳನ್ನು ನಾಟಕ ಹಾಗೂ ವೇದಿಕೆ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ಪ್ರೇರೇಪಿಸಲಾಯಿತು.

ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ರಂಗಭೂಮಿಯ ಕುರಿತು ಉಪಯುಕ್ತ ಹಾಗೂ ಪ್ರೇರಣಾದಾಯಕ ಮಾಹಿತಿಯನ್ನು ಪಡೆದುಕೊಂಡರು. ಈ ಕಾರ್ಯಕ್ರಮವು ಭಾರತೀಯ ಕಲೆ ಮತ್ತು ಸಂಸ್ಕೃತಿಯ ಸಂರಕ್ಷಣೆಯ ಮಹತ್ವವನ್ನು ಮಕ್ಕಳಿಗೆ ಅರಿವು ಮೂಡಿಸುವಲ್ಲಿ ಯಶಸ್ವಿಯಾಯಿತು.

# ಶತಾಯುಷಿ ಸಾವಿತ್ರಮ್ಮಗೆ ಕುಟುಂಬಸ್ಥರ ಪಾದಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲ್ಲೂಕಿನ ನಾಡನಹಳ್ಳಿ ಗ್ರಾಮದಲ್ಲಿ ಶತಾಯುಷಿ ಸಾವಿತ್ರಮ್ಮ (101) ಅವರಿಗೆ ಕುಟುಂಬಸ್ಥರು ಭಾನುವಾರ ಪಾದಪೂಜೆ ನೆರವೇರಿಸಿ ಅವರ ಆರೋಗ್ಯಕ್ಕಾಗಿ ಪ್ರಾರ್ಥಿಸಿದರು. ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಹೆಚ್. ಎನ್.ಲೋಕೇಶ್ ಮಾತನಾಡಿ, ಮೂಲ ಆಹಾರ ಪದ್ಧತಿ ಅನುಸರಿಸುತ್ತಿದ್ದ ನಮ್ಮ ಪೂರ್ವಜರು ನೂರಾರು ವರ್ಷಗಳ ಕಾಲ ಆರೋಗ್ಯವಂತರಾಗಿ ಬದುಕುತ್ತಿದ್ದರು. ಸಾವಿತ್ರಮ್ಮ ಕೂಡ ನೂರು ವರ್ಷಗಳನ್ನು ಪೂರೈಸಿದ್ದು ಅದಕ್ಕೆ ಅವರ ಜೀವನ ಶೈಲಿಯೇ ಕಾರಣವೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಸಕ್ತ ದಿನಗಳಲ್ಲಿ ಆಧುನಿಕ ಜೀವನ ಶೈಲಿ ಹಾಗೂ ಆಹಾರ ಪದ್ಧತಿಯು ಬದಲಾವಣೆ ಪರಿಣಾಮ ಆರೋಗ್ಯಯುತ ಬದುಕು ಕಣ್ಮರೆಯಾಗುತ್ತಿದೆ. ಬಾಳಿ ಬದುಕಬೇಕಾದ ಜೀವಗಳು ಅನಾರೋಗ್ಯದಿಂದ ಬಳಲುತ್ತಿವೆ ಎಂದರು.

ಆರೋಗ್ಯದ ಜೊತೆಗೆ ಜನರ ಮನಸ್ಥಿತಿಯೂ ಸಹ ಬದಲಾವಣೆಗೊಂಡಿದೆ. ಗುರು-ಹಿರಿಯರಿಗೆ ಗೌರವ ನೀಡುತ್ತಿಲ್ಲ, ಹೆತ್ತವರನ್ನು ನಿರ್ಲಕ್ಷಿಸುವ ಸ್ಥಿತಿ ನಿರ್ಮಾಣವಾಗಿದೆ. ಪರಿಣಾಮ ವೃದ್ಧಾಶ್ರಮಗಳ ಸಂಖ್ಯೆಯು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಪೂರ್ವಕಾಲದಲ್ಲಿ ಅವಿಭಕ್ತ ಕುಟುಂಬ ಎಂದರೆ ಸುಮಾರು 30 ರಿಂದ 70 ಜನರು ಒಂದೇ ಮನೆಯಲ್ಲಿ ವಾಸವಾಗುತ್ತಿದ್ದರು. ಅಂದು ಮನೆಗಳಲ್ಲಿ ಸುಖ, ಶಾಂತಿ ಹಾಗು ನೆಮ್ಮದಿ ಇತ್ತು. ಇತ್ತೀಚಿನ ವರ್ಷಗಳಿಂದ ಶಿಕ್ಷಣದೊಂದಿಗೆ ಆಧುನಿಕತೆ ಬದಲಾದಂತೆಲ್ಲ ವಿಭಕ್ತ ಕುಟುಂಬಗಳು ಹೆಚ್ಚಾಗಿದ್ದು ಬಹುತೇಕ ಕುಟುಂಬಗಳಲ್ಲಿ ನೆಮ್ಮದಿಗೆ ಜಾಗವಿಲ್ಲದಂತಾಗಿದೆ ಎಂದು ತಿಳಿಸಿದರು. ಶತಾಯುಷಿ ಸಾವಿತ್ರಮ್ಮ ಅವರ ಮೊಮ್ಮಗ ಆನಂದ್ ಕುಮಾರ್ ಹಾಗೂ ಕುಟುಂಬಸ್ಥರು ಪಾದಪೂಜೆ ನೆರವೇರಿಸಿ ಗೌರವಿಸಿದರು.

## ವಿಶೇಷ ಚೇತನರಿಂದ ಲೇಖನ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಕಲಚೇತನರ ಶ್ರೇಯೊಭಿವೃದ್ಧಿ, ಸರ್ಕಾರದ ಯೋಜನೆಗಳ ತಲುಪಿಸುವ ನಿಟ್ಟಿನಲ್ಲಿ ಕಳೆದ ಹಲವು ವರ್ಷಗಳಿಂದ ಗುರುತರ ಜವಾಬ್ದಾರಿ ನಿರ್ವಹಿಸಿಕೊಂಡು ಬಂದಿರುವ ಅನನ್ಯ ಟ್ರಸ್ಟ್ ವಿಶೇಷ ಚೇತನರಿಗಾಗಿ ವಿಶೇಷ ಸಂಚಿಕೆ ಹೊರತರುತ್ತಿದ್ದು, ಆಸಕ್ತ ವಿಕಲಚೇತನರಿಂದ ಲೇಖನಗಳನ್ನು ಆಹ್ವಾನಿಸಿದೆ.

ತಮ್ಮ ಜೀವನ, ಸಾಧನೆ, ನಿತ್ಯ ಜೀವನದಲ್ಲಿ ಎದುರಿಸುವ ಸವಾಲುಗಳ ವಿಷಯವನ್ನು ಕೇಂದ್ರಿಕರಿಸಿ ಕನಿಷ್ಠ 800 ರಿಂದ 1 ಸಾವಿರ ಪದಗಳ ಮಿತಿಯಲ್ಲಿ ಲೇಖನ ಇರಬೇಕು. ನುಡಿ ಅಥವಾ ಯೂನಿಕೋಡ್ ಫಾಂಟ್ ನಲ್ಲಿ ಬರಹ ಇರಬೇಕು. ಲೇಖಕರು ತಮ್ಮ ಸಂಪೂರ್ಣ ಹೆಸರು ವಿಳಾಸ ಹಾಗೂ ಭಾವಚಿತ್ರವನ್ನು ಲಗತ್ತಿಸಬೇಕು. ಲೇಖನ ಕಳುಹಿಸಲು ಕೊನೆಯ ದಿನಾಂಕ 25-02-2026.

ಇಮೇಲ್ ವಿಳಾಸ: anannyatrusthsnhassan@gmail.com, ಮಾಹಿತಿಗೆ ಮೊ.ನಂ. 9632065044, 9964095071 ಇಲ್ಲಿಗೆ ಸಂಪರ್ಕಿಸಬಹುದು.

# 1.6 ಕೋಟಿ ರೂ. ವೆಚ್ಚದ ರಸ್ತೆ ಕಾಮಗಾರಿಗೆ ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಶ್ರವಣಬೆಳಗೊಳ: ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಸುಗ್ಗನಹಳ್ಳಿ ಗೇಟ್‌ನಿಂದ ಕಾಂತರಾಜಪುರ ಮುಖ್ಯ ರಸ್ತೆ ಸಂಪರ್ಕಿಸುವ 2.5 ಕಿ.ಮೀ. ರಸ್ತೆಯನ್ನು 1.6 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆಯೆಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು. ಹೋಬಳಿಯ ಕಾಂತರಾಜಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುಗ್ಗನಹಳ್ಳಿ ಗೇಟ್‌ನಲ್ಲಿ ಏರ್ಪಡಿಸಿದ್ದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಈ ಗ್ರಾಮದ ರಸ್ತೆ ನಿರ್ಮಾಣದಿಂದಾಗಿ ಮಳೆಗಾಲದಲ್ಲಿ ತೊಂದರೆ ಅನುಭವಿಸುತ್ತಿದ್ದ ಗ್ರಾಮಸ್ಥರಿಗೆ ಅನುಕೂಲವಾಗಲಿದೆ. ಸುಗ್ಗನಹಳ್ಳಿ ಗ್ರಾಮದ ರಸ್ತೆ ತುಂಬಾ ಹದಗೆಟ್ಟಿದ್ದು, ಗುಣಮಟ್ಟದ ಕಾಮಗಾರಿ ಮಾಡಬೇಕೆಂದು ಲೋಕೋಪಯೋಗಿ ಇಲಾಖೆ ಇಂಜಿನಿಯರ್ ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಕೆ.ಹೊಸಹಳ್ಳಿ, ಕೆ.ಬೊಮ್ಮೇನಹಳ್ಳಿ ಗ್ರಾಮಗಳ ನಿರಂತರ ವಿದ್ಯುತ್ ಸಂಪರ್ಕ ಕಾಮಗಾರಿಗೆ ಚಾಲನೆ ನೀಡಿದರು. ಗ್ರಾಮ ಪಂಚಾಯಿತಿ ಸದಸ್ಯ ಮಹೇಶ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರವಿ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಬಸವರಾಜು, ಇಂಜಿನಿಯರ್ ಮಂಜಣ್ಣ, ಗುತ್ತಿಗೆದಾರ ಜಯಂತ್ ಮುಖಂಡರಾದ ಶಿವಲಿಂಗಪ್ಪ, ಕಾಳೇಗೌಡ, ಕೀರ್ತಿ, ಶ್ರೀರಂಗ, ಕ್ಷೇತ್ರಪಾಲ್, ಮಧು, ತಾಲ್ಲೂಕು ವಿದ್ಯುತ್ ಗುತ್ತಿಗೆದಾರರ ಸಂಘದ ರಮೇಶ್, ಸುರೇಶ್ ಇದ್ದರು.

# ಸಾರಿಗೆ ಸಂಸ್ಥೆಯ ಖಾಲಿ ಜಾಗ ಪ.ಪಂ.ಗೆ: ಚರ್ಚಿಸಿ ನಿರ್ಧಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಸಾರಿಗೆ ಇಲಾಖೆಗೆ ಸೇರಿದ ಒಂದೂವರೆ ಎಕರೆ ಜಾಗವನ್ನು ಪಟ್ಟಣ ಪಂಚಾಯಿತಿಗೆ ಬಿಟ್ಟುಕೊಡುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದೆಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದರು.

ಸೋಮವಾರಪೇಟೆಗೆ ತೆರಳುತ್ತಿದ್ದ ಅವರು ಶಾಸಕ ಎ.ಮಂಜು ಅವರ ಮನವಿ ಮೇರೆಗೆ ಸ್ಥಳಕ್ಕಾಗಮಿಸಿ ಪರಿಶೀಲಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ತಾಲ್ಲೂಕಿನಲ್ಲಿ ಎರಡು ಬಸ್ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಹೊಸ ಬಸ್ ನಿಲ್ದಾಣಕ್ಕೂ ಅಧಿಕ ಜಾಗವಿದೆ. ಹಳೆಯ ಬಸ್ ನಿಲ್ದಾಣಕ್ಕೆ ಶಾಸಕರು ಒಂದು ಎಕರೆ ಜಾಗ ನೀಡಿದ್ದಾರೆ. ಸುಮಾರು ಒಂದೂವರೆ ಎಕರೆ ಜಾಗ ಪಟ್ಟಣದ ಹೃದಯಭಾಗದಲ್ಲಿ ಅನುಪಯುಕ್ತವಾಗಿದೆ. ಬಳಕೆ ಸಲುವಾಗಿ ಪಟ್ಟಣ ಪಂಚಾಯಿತಿಗೆ ಬಿಟ್ಟುಕೊಡುವಂತೆ ಕೇಳಿಕೊಂಡಿದ್ದಾರೆ. ಈ ಜಾಗ ಸಂಸ್ಥೆಗೆ ಅಗತ್ಯವಿದೆಯೋ ಇಲ್ಲವೋ ಎಂಬುದರ ಬಗ್ಗೆ ಕೂಡಲೇ ಸಮಾಲೋಚನೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

### ಜಾಹೀರಾತು ಫಲಕ ತೆರವಿಗೆ ಸೂಚನೆ

ಸಾರಿಗೆ ಸಂಸ್ಥೆ ಬಸ್‌ಗಳ ಮೇಲೆ ಅಂಟಿಸುತ್ತಿದ್ದ ತಂಬಾಕು



ಬಳಕೆ ಜಾಹೀರಾತುಗಳ ಫಲಕ ಹಾಗೂ ಬಂಟಿಂಗ್ಸ್ ತೆರವಿಗೆ ಸೂಚನೆ ನೀಡಲಾಗಿದೆ. ಎಲ್ಲಾ ನಿಗಮಗಳ ಬಸ್‌ಗಳಲ್ಲಿ ಅಳವಡಿಸಿರುವ ಜಾಹೀರಾತು ತೆರವು ತ್ವರಿತವಾಗಿ ಆಗಲಿದೆ.

ತಾಲ್ಲೂಕಿನಲ್ಲಿ ಎರಡು ಬಸ್ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಹೆಚ್ಚುವರಿ ಬಸ್ ಮಾರ್ಗಗಳ ಕುರಿತು ಲಿಖಿತ ಮಾಹಿತಿ ನೀಡಿದರೇ ಬಸ್ ವ್ಯವಸ್ಥೆಯನ್ನು ಮಾಡಲಾಗುವುದು. ಕೆಲವು ಗ್ರಾಮೀಣ ಭಾಗದ ಬಸ್ ಸೇವೆಯನ್ನು ಸ್ಥಗಿತಗೊಳಿಸಿದ್ದು, ಕೂಡಲೇ ಆರಂಭಿಸಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಪಟ್ಟಣದ ಬಸ್ ನಿಲ್ದಾಣದಲ್ಲಿ ಪುಂಡರ ಹಾವಳಿ ಹೆಚ್ಚಿದೆ. ನಿಲ್ದಾಣದಲ್ಲಿ ಖಾಸಗಿ ವಾಹನಗಳ ಓಡಾಟ, ಕಾಲೇಜು ವಿದ್ಯಾರ್ಥಿನಿಯರಿಗೆ ತೊಂದರೆ ನೀಡುವುದು, ಖಾಸಗಿ ವಾಹನ ನಿಲ್ದಾಣವಿದ್ದರೂ ಬಳಕೆ ಮಾಡಿಕೊಳ್ಳುತ್ತಿಲ್ಲ. ಇಡೀ ಬಸ್ ನಿಲ್ದಾಣದಲ್ಲಿ ಖಾಸಗಿ ವಾಹನಗಳ ನಿಲುಗಡೆಯಾಗುತ್ತಿದೆಯೆಂಬ ಪ್ರಶ್ನೆಗೆ ಉತ್ತರಿಸಿದ ಅವರು, ಪೊಲೀಸರು ಸಾರ್ವಜನಿಕರ ರಕ್ಷಣೆಗೆ ಆದ್ಯತೆ ನೀಡಬೇಕು. ಬಸ್ ನಿಲ್ದಾಣ, ಶಾಲಾ ಕಾಲೇಜು ಬಿಡುವ ವೇಳೆ ಪೊಲೀಸರು ಸ್ಥಳಗಳಿಗೆ ಭೇಟಿ ನೀಡಿ ಗಮನ ಹರಿಸಬೇಕಿದೆ. ಈ ಬಗ್ಗೆ ಪೊಲೀಸ್ ಹಿರಿಯ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕೆಂದರು.

ಶಾಸಕ ಎ.ಮಂಜು ಅವರು ಮಾತನಾಡಿ, ಈ ಹಿಂದೆಯೂ ರಾಮಲಿಂಗಾ ರೆಡ್ಡಿ ಅವರು ಸಾರಿಗೆ ಸಚಿವರಾಗಿದ್ದಾಗ ತಾಲ್ಲೂಕಿನ ಬಸ್ ನಿಲ್ದಾಣಗಳ ಅಭಿವೃದ್ಧಿಗೆ ನೆರವಾಗಿದ್ದಾರೆ. ಅನಕೃ ವೃತ್ತದಲ್ಲಿ ಪಾಳು ಬಿದ್ದಿರುವ ಹಳೆ ಬಸ್ ನಿಲ್ದಾಣ ಜಾಗವನ್ನು ಪಟ್ಟಣ ಪಂಚಾಯಿತಿಗೆ ಬಿಟ್ಟುಕೊಟ್ಟರೆ ಅಭಿವೃದ್ಧಿಗೆ ಅನುಕೂಲವಾಗುತ್ತದೆ. ಈ ದಿಸೆಯಲ್ಲಿ ಸಚಿವರು ಕ್ರಮ ಕೈಗೊಳ್ಳುವ ಭರವಸೆ ಇದೆ ಎಂದರು.

# ಸಾಲಬಾಧೆ: ವ್ಯಕ್ತಿ ಆತ್ಮಹತ್ಯೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಜಮೀನು ಮಾರಾಟ ಮಾಡಿದರೂ ಸಾಲ ತೀರದ ಹಿನ್ನಲೆಯಲ್ಲಿ ಮನನೊಂದ ವ್ಯಕ್ತಿ ನೇಣಿಗೆ ಶರಣಾಗಿರುವ ಘಟನೆ ತಾಲ್ಲೂಕಿನ ಕಟ್ಟೆಸೋಮನಹಳ್ಳಿ ಗ್ರಾಮದಲ್ಲಿ ನಡೆದಿದೆ. ಕೆ.ಜೆ.ರಮೇಶ್ ಮೃತರು. ಕೃಷಿಗಾಗಿ ಸುಮಾರು 6 ಲಕ್ಷ ರೂ. ಬ್ಯಾಂಕ್ ಹಾಗೂ 20 ಲಕ್ಷ ರೂ. ಸಾಲ ಮಾಡಿಕೊಂಡಿದ್ದರು. ಸಾಲ ತೀರಿಸಲು ಸಾಧ್ಯವಾಗದೆ ಮನನೊಂದು ಭಾನುವಾರ ಬೆಳಿಗ್ಗೆ ತಮ್ಮ ಜಮೀನು ಪಕ್ಕದ ತೇಗದ ಮರಕ್ಕೆ ನೇಣು ಹಾಕಿಕೊಂಡಿದ್ದಾರೆ.

10 ವರ್ಷಗಳ ಹಿಂದೆ ಗೋಣಿಸೋಮನಹಳ್ಳಿ ಕೆನರಾ ಬ್ಯಾಂಕ್‌ನಲ್ಲಿ ಹೆಂಡತಿ ಹೆಸರಿನಲ್ಲಿ 2 ಲಕ್ಷ ರೂ. ಹಾಗು ತಮ್ಮ ಹೆಸರಿನಲ್ಲಿ 4 ಲಕ್ಷ ರೂ. ಸಾಲ ಪಡೆದಿದ್ದರು.

ಬ್ಯಾಂಕ್‌ನವರು ಮನೆ ಜಪ್ತಿಗೆ ಬಂದಿದ್ದರಿಂದ ತಮ್ಮ ಪಾಲಿನ ಜಮೀನನ್ನು 8 ಲಕ್ಷ ರೂ.ಗೆ ಮಾರಾಟ ಮಾಡಿ ಬ್ಯಾಂಕ್ ಹಾಗು ಸ್ವಲ್ಪ ಕೈ ಸಾಲ ತೀರಿಸಿದ್ದರು.

ಇಷ್ಟು ಮಾತ್ರವಲ್ಲದೆ 20 ಲಕ್ಷ ರೂ. ಕೈ ಸಾಲ ಹಾಗೂ ಹಳೇಬೀಡು ಕರ್ನಾಟಕ ಗ್ರಾಮೀಣ ಬ್ಯಾಂಕ್‌ನಲ್ಲಿ ಚಿನ್ನಾಭರಣ ಗಿರವಿ ಇಟ್ಟಿದ್ದರು. ಬೆಳೆ ಕೈ ಕೊಟ್ಟ ಹಿನ್ನಲೆಯಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಕ್ಕಳಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸುವುದು ಅತ್ಯವಶ್ಯಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮಕ್ಕಳಿಗೆ ವೈಜ್ಞಾನಿಕ ಮನೋಭಾವ ಬೆಳೆಸುವುದು ಬಹಳ ಮುಖ್ಯವೆಂದು ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ರಾಜ್ಯಾಧ್ಯಕ್ಷ ಹುಲಿಕಲ್ ನಟರಾಜ್ ಹೇಳಿದರು.

ನಗರದ ಕುವೆಂಪು ನಗರದಲ್ಲಿರುವ ಲಯನ್ಸ್ ಕ್ಲಬ್ ಭವನದಲ್ಲಿ ಭಾನುವಾರ ಲಯನ್ಸ್ ಕ್ಲಬ್ ಹಾಸನ ಹಾಗೂ ದೊಡ್ಡಬಳ್ಳಾಪುರ ಅಂತರ್ ಜಿಲ್ಲಾ ಟ್ವಿನ್ ಕ್ಲಬ್ ಸಭೆ ಮತ್ತು ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಣ, ಆರೋಗ್ಯ, ಕೃಷಿ ಸೇರಿ ಎಲ್ಲಾ ಕ್ಷೇತ್ರಗಳಲ್ಲೂ ವಿಜ್ಞಾನಾಧಾರಿತ ಜ್ಞಾನವನ್ನು ಅಳವಡಿಸಿಕೊಳ್ಳುವುದರಿಂದ ಮಾತ್ರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಾಧ್ಯವಾಗುತ್ತದೆ. ವೈದ್ಯಕೀಯ ಚಿಕಿತ್ಸೆಯ ಬದಲು ಮೂಢ ನಂಬಿಕೆಯಿಂದ ಹಿಂದೆ ಹೋಗುವುದು ಅಪಾಯಕಾರಿ ಎಂದರು.

ಮಕ್ಕಳಲ್ಲಿ ಪ್ರಶ್ನಿಸುವ ಗುಣ, ತರ್ಕಬದ್ಧ ಚಿಂತನೆ ಹಾಗೂ ಸಾಕ್ಷ್ಯಾಧಾರಿತ ನಂಬಿಕೆಗಳು ಸಮಾಜದ ಪ್ರಗತಿಗೆ ದಾರಿ ಮಾಡಿಕೊಡುತ್ತವೆ. ಮೂಢನಂಬಿಕೆಗಳಿದ ದೂರವಿದ್ದು, ವಿಜ್ಞಾನವನ್ನು ಜೀವನದ ಭಾಗವಾಗಿಸಿಕೊಂಡಾಗ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ. ಮಕ್ಕಳಲ್ಲಿ ವಿಜ್ಞಾನದ ಬಗ್ಗೆ ಹೆಚ್ಚಿನ ಆಸಕ್ತಿ ಮೂಡಿಸಲು ನಾನು ವಿಜ್ಞಾನಿ ಎಂಬ ಕಾರ್ಯಕ್ರಮ ನಡೆಸುತ್ತಿದ್ದು, ಯಶಸ್ವಿಯಾಗಿದೆ ಎಂದರು. ದೊಡ್ಡಬಳ್ಳಾಪುರ ಲಯನ್ಸ್ ಕ್ಲಬ್ 75 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿದೆ. ಡಯಾಲಿಸಿಸ್ ಹಾಗೂ ಮಾನಸಿಕ ಆಸ್ಪತ್ರೆ, ಆಪ್ತ ಸಮಾಲೋಚನೆ ನಡೆಸಲಾಗುತ್ತಿದ್ದು, ಈ ವರ್ಷ ದಾನಿಗಳಿಂದ ಹೆಚ್ಚಿನ ಸಿಎಸ್ ಆರ್ ಫಂಡ್ ಬರುತ್ತಿದ್ದು, ಕಣ್ಣಿನ ಪರೀಕ್ಷೆ ಮತ್ತು ಚಿಕಿತ್ಸೆ ನೀಡಲು ಆಸ್ಪತ್ರೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.


ರಾಜ್ಯದ 93 ಕ್ಲಬ್‌ನ ಸದಸ್ಯರು ಉಚಿತವಾಗಿ ಪರೀಕ್ಷೆ ಮಾಡಿಸಿಕೊಳ್ಳಬಹುದಾಗಿದೆ. ಯತ್ರೋಪಕರಣಗಳ ಖರೀದಿಗೆ 1.5 ಕೋಟಿ ರೂ. ಅಗತ್ಯವಾಗಿದ್ದು ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ. ವೀರೇಂದ್ರ ಹೆಗ್ಗಡೆಯಅವರ ಬಳಿ ಸಹಾಯ ಕೇಳಲಾಗುವುದು ಎಂದು ಮಾಹಿತಿ ನೀಡಿದರು.

ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ದೊಡ್ಡಬಳ್ಳಾಪುರದಲ್ಲಿ ಇತ್ತೀಚೆಗೆ ನಡೆದ ನಾನು ವಿಜ್ಞಾನಿ ಎಂಬ ಕಾರ್ಯಕ್ರಮದಲ್ಲಿ 162 ವಿದ್ಯಾರ್ಥಿಗಳು ಟೆಲಿಸ್ಕೋಪ್ ತಯಾರಿಸಿ ಏಷ್ಯಾ ಹಾಗೂ ಇಂಡಿಯಾ ಬುಕ್ ಆಫ್ ರೆಕಾರ್ಡ್ ದಾಖಲೆ ಮಾಡಿದ್ದಾರೆ. ಜಿಲ್ಲೆಯ ಪುಷ್ಪಗಿರಿಯಲ್ಲಿ ಏಪ್ರಿಲ್ ಅಂತ್ಯದಲ್ಲಿ ನಡೆಯುವ ನಾನು ವಿಜ್ಞಾನಿ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ಭಾಗವಹಿಸಲಿದ್ದು, ಇನ್ನ ಹೆಚ್ಚಿನ ದಾಖಲೆ ಮಾಡುವ ಸಾಧನೆಯನ್ನು ಸಾವಿರಾರು ವಿದ್ಯಾರ್ಥಿಗಳು ಮಾಡಲಿದ್ದಾರೆಂದು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಾಸನ ಲಯನ್ಸ್ ಕ್ಲಬ್ ಜಿಲ್ಲಾಧ್ಯಕ್ಷ ರಮೇಶ್ ವಹಿಸಿದ್ದರು.

ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಗೌರವಾಧ್ಯಕ್ಷ ಕಮಲ್ ಕುಮಾರ್, ರವಿಕುಮಾರ್, ದೊಡ್ಡಬಳ್ಳಾಪುರ ಲಯನ್ಸ್ ಕ್ಲಬ್ ಅಧ್ಯಕ್ಷ ನಂಜುಡೇಶ್ವರ, ಜಗದೀಶ್, ಹಾಸನ ಲಯನ್ಸ್ ಕ್ಲಬ್ ಕಾರ್ಯದರ್ಶಿ ಶಿವಸ್ವಾಮಿ, ಖಜಾಂಚಿ ಚನ್ನೇಗೌಡ, ಕಾರ್ಯನಿರತ ಪತ್ರಕರ್ತ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್ .ಬಿ.ಮದನಗೌಡ ಮತ್ತಿತರರಿದ್ದರು.

# ವಿರಾಟ್ ಕೊಹ್ಲಿ ಅವರ ಸಕಾರಾತ್ಮಕ ಚಿಂತನೆ



ಪ್ರತಿಭೆ ನಿಮಗೆ ಆರಂಭ ಕೊಡಬಹುದು; ಆದರೆ ನಿರಂತರ ಪರಿಶ್ರಮ ಮತ್ತು ಶಿಸ್ತು ಮಾತ್ರ ನಿಮ್ಮನ್ನು ದೀರ್ಘಕಾಲ ಯಶಸ್ಸಿನ ಶಿಖರದಲ್ಲಿ ಉಳಿಸುತ್ತವೆ-ವಿರಾಟ್ ಕೊಹ್ಲಿ

ಈ ಮಾತು ಜೀವನದ ನಿಜವಾದ ಯಶಸ್ಸಿನ ಸೂತ್ರವನ್ನು ತಿಳಿಸುತ್ತದೆ. ಪ್ರತಿಭೆ ನಮ್ಮನ್ನು ಮುಂದೆ ನೂಕಬಹುದು. ಆದರೆ ಅದನ್ನು ಉಳಿಸಿಕೊಳ್ಳಲು ಶಿಸ್ತು ಮತ್ತು ನಿರಂತರ ಅಭ್ಯಾಸ ಅಗತ್ಯ. ವಿರಾಟ್ ಕೊಹ್ಲಿಯ ಸಾಧನೆಗಳು ಅವನ ಫಿಟ್ನೆಸ್, ಸಮರ್ಪಣೆ ಮತ್ತು ದೃಢ ಮನೋಭಾವದ ಫಲ. ವಿದ್ಯಾರ್ಥಿಗಳು ಮತ್ತು ಯುವಕರು ದಿನನಿತ್ಯದ ಪರಿಶ್ರಮ, ಸಮಯ ಪಾಲನೆ ಹಾಗೂ ಸಕಾರಾತ್ಮಕ ಚಿಂತನೆಯ ಮೂಲಕ ತಮ್ಮ ಗುರಿಗಳನ್ನು ಸಾಧಿಸಬಹುದು. ಸೋಲನ್ನು ಹೆದರದೆ ಪಾಠವಾಗಿ ತೆಗೆದುಕೊಂಡು ಮುಂದುವರಿದರೆ ಯಶಸ್ಸು ಖಂಡಿತ ದೊರೆಯುತ್ತದೆ. ಸಣ್ಣ ಪ್ರಯತ್ನಗಳನ್ನೂ ನಿರಂತರವಾಗಿ ಮುಂದುವರೆಸಿದರೆ ದೀರ್ಘಕಾಲದ ಸಾಧನೆ ಸಾಧ್ಯವಾಗುತ್ತದೆ ಎಂಬ ಪ್ರೇರಣೆಯನ್ನು ಈ ಸಂದೇಶ ನೀಡುತ್ತದೆ.

**- ಅಂತೋಣಿ ಮುತ್ತು ವಿ, ಶಿಕ್ಷಕರು 7259675543**

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-10

**1763:** ಪ್ಯಾರಿಸ್ ಒಪ್ಪಂದಕ್ಕೆ ಸಹಿ ಹಾಕಲಾಗಿದ್ದು, ಏಳು ವರ್ಷದ ಯುದ್ಧಕ್ಕೆ ಅಂತ್ಯವಾಯಿತು.

**1840:** ಬ್ರಿಟನ್‌ನ ರಾಣಿ ವಿಕ್ಟೋರಿಯಾ ಅವರು ಪ್ರಿನ್ಸ್ ಅಲ್ಬರ್ಟ್ ಅವರನ್ನು ವಿವಾಹವಾದರು.

**1942:** ಜಪಾನ್ ಸೇನೆ ಸಿಂಗಾಪುರದ ಮೇಲೆ ದಾಳಿ ನಡೆಸಿತು.

### ಜನನ

**1890:** ಬೋರಿಸ್ ಪಾಸ್ಟರ್ನಾಕ್, ರಷ್ಯನ್ ಕವಿ ಮತ್ತು ಕಾದಂಬರಿಕಾರ (ನೋಬೆಲ್ ಪ್ರಶಸ್ತಿ ಪುರಸ್ಕೃತರು)

**1968:** ರಾಹುಲ್ ರಾಯ್, ಭಾರತೀಯ ಚಲನಚಿತ್ರ ನಟ

### ಮರಣ

**1755:** ಮೊಂಟೆಸ್ಕ್ಯೂ, ಫ್ರೆಂಚ್ ತತ್ವಜ್ಞಾನಿ ಮತ್ತು ರಾಜಕೀಯ ಚಿಂತಕ

# ವ್ಯವಹಾರ ಜ್ಞಾನ ಬೆಳೆಸಲು ಮಕ್ಕಳ ಸಂತೆ ಸಹಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಚನ್ನರಾಯಪಟ್ಟಣ: ಶೈಕ್ಷಣಿಕ ಹಂತದಿಂದಲೇ ವಿದ್ಯಾರ್ಥಿಗಳಲ್ಲಿ ವ್ಯವಹಾರ ಜ್ಞಾನ ಬೆಳೆಸಲು ಮಕ್ಕಳ ಸಂತೆ ಪ್ರಮುಖ ವೇದಿಕೆಯಾಗುತ್ತದೆಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಕುಸುಮಾ ರಾಣಿ ಹೇಳಿದರು.

ಪಟ್ಟಣದ ಶಾಲಿನಿ ಇಂಟರ್ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಆಯೋಜಿಸಿದ್ದ ಮಕ್ಕಳ ಸಂತೆ ಹಾಗು ಆಹಾರ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸಮಾಜದಲ್ಲಿ ಬದುಕಲು ಸಾಮಾನ್ಯ ಜ್ಞಾನದ ಜೊತೆಗೆ ವ್ಯವಹಾರ ಜ್ಞಾನವು ಅಗತ್ಯ ಎಂದರು.

ಉಪ ಪೊಲೀಸ್ ವರಿಷ್ಠಾಧಿಕಾರಿ ಕುಮಾರ್ ಮಾತನಾಡಿ, ಶಿಕ್ಷಣದ ಜೊತೆಗೆ ಬದುಕು ರೂಪಿಸಿಕೊಳ್ಳುವ ನಿಟ್ಟಿನಲ್ಲಿ ಪೂರಕವಾದ ಪಠ್ಯೇತರ ಚಟುವಟಿಕೆಗಳನ್ನು ಕಲ್ಪಿಸುವುದು ಶಾಲೆಗಳ ಜವಾಬ್ದಾರಿಯಾಗಿದೆ. ನಾಗಾಲೋಟದಲ್ಲಿ ಓಡುತ್ತಿರುವ ಅತ್ಯಾಧುನಿಕ ಜಗತ್ತಿನಲ್ಲಿ ಉತ್ತಮ ವ್ಯಕ್ತಿತ್ವ ರೂಪಿಸಿಕೊಂಡು ಬದುಕಬೇಕೆಂದರೆ ಶಿಕ್ಷಣದ ಜೊತೆಗೆ ವ್ಯವಹಾರ ಜ್ಞಾನವು ಮುಖ್ಯವಾಗಲಿದೆ ಎಂದರು.

ಶಾಲೆಯಲ್ಲಿ ಸಿಗುವ ಶಿಕ್ಷಣದ ಜೊತೆಗೆ ಮನೆಗಳಲ್ಲಿ ಪಾಲಕರ ನಡೆ-ನುಡಿ ಹಾಗೂ ಸಂಸ್ಕಾರವೂ ಸಹ ಮಕ್ಕಳ ಬದುಕಿನ ದಾರಿ ದೀಪವಾಗಲಿದೆ. ಪಾಲಕರು ತಮ್ಮ ಮಕ್ಕಳ ದೈನಂದಿನ ಚಟುವಟಿಕೆಗಳ ಮೇಲೆ ಗಮನ ಹರಿಸುವುದು ಒಳ್ಳೆಯದು. ಇದರಿಂದ ಅವರ ಭವಿಷ್ಯವನ್ನು ಉತ್ತಮವಾಗಿ ರೂಪಿಸಲು ಸಾಧ್ಯವಾಗಲಿದೆ ಎಂದು ಪಾಲಕರಿಗೆ ಸಲಹೆ ನೀಡಿದರು. ಕಳೆದ ವರ್ಷ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಶಾಲೆ ವತಿಯಿಂದ ಅಭಿನಂದಿಸಲಾಯಿತು.

ಮಕ್ಕಳ ಸಂತೆ ಹಾಗೂ ಆಹಾರ ಮೇಳದಲ್ಲಿ ಎಲ್ಲಾ ರೀತಿಯ ಸೊಪ್ಪು, ತರಕಾರಿ ಹಾಗೂ ಹಣ್ಣುಗಳನ್ನು ವಿದ್ಯಾರ್ಥಿಗಳು ಮಾರಾಟ ಮಾಡಿದರು. ಜೊತೆಗೆ ಪಾನಿಪುರಿ, ವಡಾಪಾವ್, ಬಜ್ಜಿ, ಸಮೋಸ, ಗೀರೈಸ್, ಬಿರಿಯಾನಿ, ಅಕ್ಕಿ ರೊಟ್ಟಿ, ಎಣ್ಣೆ ಬದನೆಕಾಯಿ, ರವೆ ಉಂಡೆ, ಜಾಮೂನು ಸೇರಿದಂತೆ ವಿವಿಧ ಖಾದ್ಯಗಳನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳು ವ್ಯಾಪಾರ ಮಾಡಿದ್ದು ಗ್ರಾಹಕರು ಖರೀದಿಸಿ ಪ್ರೋತ್ಸಾಹ ನೀಡಿದರು.

ಸಂಸ್ಥೆಯ ಸಂಸ್ಥಾಪಕರಾದ ಸಿ.ಎನ್.ನಂಜುಂಡೇಗೌಡ, ಪುರಸಭೆ ಉಪಾಧ್ಯಕ್ಷೆ ರಾಣಿಕೃಷ್ಣ, ಕುವೆಂಪು ವೇದಿಕೆ ಅಧ್ಯಕ್ಷ ಕುಂಬಾರಹಳ್ಳಿ ರಮೇಶ್, ಸಮಾಜ ಸೇವಕರಾದ ವಡ್ಡರಹಳ್ಳಿ ಗಣೇಶ್, ಚಿಕ್ಕಬಿಳ್ತಿ ಗಂಗಾಧರ್, ಶಿಕ್ಷಕ ವೃಂದ ಪಾಲಕರು ಹಾಗೂ ಇತರರು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248